**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ. DTE-ADMI0ACM2/96/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:01-10-2021.

**-:: ಸು ತ್ತೋಲೆ ::-**

**ವಿಷಯ:** 2021-22ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ **ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.**

**ಉಲ್ಲೇಖ:**
1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:18-09-2021.
2. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

-OOOOOO-

2021-22ನೇ ಸಾಲಿನ ಹಗಲು ಪಾಳಿಯ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆಯಲು ದಿ:30-09-2021ರ ಒಳಗೆ ಪ್ರವೇಶ ಪಡೆಯಲು ಅವಧಿಯನ್ನು ವಿಸ್ತರಿಸಿ ಉಲ್ಲೇಖ(1)ರಲ್ಲಿ ಅನುಮತಿ ನೀಡಲಾಗಿತ್ತು.

ಪ್ರವೇಶಾವಧಿಯನ್ನು ವಿಸ್ತರಿಸಲು ಸಂಬಂಧಪಟ್ಟ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಪ್ರಸ್ತುತ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆ ಪೂರ್ಣಗೊಂಡಿದು, ಪರೀಕ್ಷಾ ಫಲಿತಾಂಶವು ಮುಂದಿನ ತಿಂಗಳ ಎರಡನೇ ವಾರದಲ್ಲಿ ಪ್ರಕಟಣೆಗೊಳ್ಳುವ ಸಂಭವ ಇರುವುದನ್ನು ಪರಿಗಣಿಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೂ ಅನುಕೂಲವಾಗುವಂತೆ ಪ್ರವೇಶ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿ ಪ್ರಾಂಶುಪಾಲರುಗಳು ಸಲ್ಲಿಸಿರುವ ಉಲ್ಲೇಖ(2)ರಲ್ಲಿ ಮನವಿಗಳನ್ನು ಪರಿಶೀಲಿಸಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ)ನಲ್ಲಿ ಉಳಿಕೆಯಾಗಿರುವ ಸೀಟುಗಳಿಗೆ **ದಿ:19-10-2021 ರ ಒಳಗೆ ಪ್ರವೇಶಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಪ್ರವೇಶಾವಧಿಯನ್ನು ವಿಸ್ತರಿಸಿ** ಅನುಮತಿ ನೀಡಲಾಗಿದೆ.

ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. **ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.** ***ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.***

| ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ. |
|---|

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

*ರಾಜ್ಯದ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ* - ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ **ದಿ:19-10-2021ರ** ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

**ಪ್ರತಿ ಮಾಹಿತಿಗಾಗಿ:-**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ) ಇವರ ಆಪ್ತಶಾಖೆಗೆ.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಇ.ಆರ್.ಎಸ್ ವಿಭಾಗಕ್ಕೆ – ಅರ್ಹತಾ ಪ್ರಮಾಣ ಪತ್ರ ವಿತರಿಸಲು ಅಗತ್ಯ ಕ್ರಮಕ್ಕಾಗಿ.
7. ಕಛೇರಿ ಪ್ರತಿ.